ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಶಾಸಕಾಂಗ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE 17/2/20

# ಜೆಡಿಎಸ್ ಶಾಸಕಾಂಗ ಪಕ್ಷದ ಸಭೆ ಇಂದು

ಉ.ವಾ. 17/2/20

ಬೆಂಗಳೂರು: ರಾಜ್ಯ ವಿಧಾನ ಮಂಡಲದ ಜಂಟಿ ಅಧಿವೇಶನದ ಹಿನ್ನೆಲೆಯಲ್ಲಿ ಸೋಮವಾರ ಬೆಳಗ್ಗೆ 9.30ಕ್ಕೆ ವಿಧಾನಸೌಧದ ಜೆಡಿಎಸ್ ಶಾಸಕಾಂಗ ಪಕ್ಷದ ಕಚೇರಿಯಲ್ಲಿ ಶಾಸಕಾಂಗ ಪಕ್ಷದ ಸಭೆ ಕರೆಯಲಾಗಿದೆ. ಜೆಡಿಎಸ್ ರಾಜ್ಯ ಘಟಕದ ಅಧ್ಯಕ್ಷ ಎಚ್.ಕೆ.ಕುಮಾರಸ್ವಾಮಿ, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ನೇತೃತ್ವದಲ್ಲಿ ಸಭೆ ನಡೆಯಲಿದ್ದು, ಅಧಿವೇಶನದಲ್ಲಿ ಆಡಳಿತಾರೂಢ ಬಿಜೆಪಿ ವಿರುದ್ಧದ ಹೋರಾಟದ ರೂಪುರೇಷೆ ಕುರಿತು ಚರ್ಚೆ ನಡೆಯಲಿದೆ. ಬೀದರ್‌ನ ಶಾಹೀನ್ ಶಾಲೆಯ ಮುಖ್ಯ ಶಿಕ್ಷಕಿ ವಿರುದ್ಧ ದೇಶದ್ರೋಹ ಪ್ರಕರಣ ಹಾಕಿರುವುದು, ಮಂಗಳೂರಿನಲ್ಲಿ ಪೌರತ್ವ ತಿದ್ದುಪಡಿ ಕಾಯ್ದೆ (ಸಿಎಎ) ವಿರುದ್ಧದ ಪ್ರತಿಭಟನೆ ವೇಳೆ ನಡೆದ ಘಟನಾವಳಿಗಳು, ಹೊಸಪೇಟೆಯ ಮರಿಯಮ್ಮನಹಳ್ಳಿ ಕಾರು ಅಪಘಾತ ಪ್ರಕರಣ, ಶಾಸಕರ ಅನುದಾನ ಕಡಿತಗೊಳಿಸಿರುವುದು, ಜೆಡಿಎಸ್-ಕಾಂಗ್ರೆಸ್ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ರೂಪಿಸಿರುವ ಯೋಜನೆಗಳನ್ನು ರದ್ದುಗೊಳಿಸಿರುವುದರ ಜತೆಗೆ ಇನ್ನು ಕೆಲವು ಯೋಜನೆಗಳಿಗೆ ಅನುದಾನ ಬಿಡುಗಡೆ ಮಾಡದಿರುವುದು ಹೋರಾಟದ ಪ್ರಮುಖ ಅಸ್ತ್ರಗಳಾಗಲಿವೆ. ಈ ವಿಷಯಗಳ ಕುರಿತು ಸದನದ ಒಳಗೆ ಮತ್ತು ಹೊರಗೆ ಹೋರಾಟ ಮಾಡಲು ತೀರ್ಮಾನ ಕೈಗೊಳ್ಳುವ ಸಾಧ್ಯತೆ ಇದೆ. ಈ ಸಂಬಂಧ 'ಉದಯವಾಣಿ'ಯೊಂದಿಗೆ ಮಾತನಾಡಿದ ಜೆಡಿಎಸ್ ರಾಜ್ಯ ಘಟಕದ ಅಧ್ಯಕ್ಷ ಎಚ್.ಕೆ.ಕುಮಾರಸ್ವಾಮಿ, ರಾಜ್ಯ ಸರ್ಕಾರದ ವೈಫಲ್ಯಗಳು ಹಾಗೂ ಜನ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಅಧಿವೇಶನದ ಒಳಗೆ ಮತ್ತು ಹೊರಗೆ ಹೋರಾಟದ ಮೂಲಕ ಸರ್ಕಾರದ ಗಮನ ಸೆಳೆಯಲಾಗುವುದು ಎಂದರು. ಅಲ್ಲದೆ, ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲರು ಮಾಡಲಿರುವ ಭಾಷಣದ ಪ್ರಮುಖ ವಿಚಾರಗಳ ಬಗ್ಗೆಯೂ ಚರ್ಚೆ ನಡೆಸಲಾಗುವುದು. ನಾಲ್ಕು ದಿನ ಅಧಿವೇಶನದಲ್ಲಿ ಎಲ್ಲ ಶಾಸಕರೂ ಹಾಜರಿರಬೇಕು ಎಂದು ಈಗಾಗಲೇ ಸೂಚನೆ ನೀಡಲಾಗಿದೆ ಎಂದು ಹೇಳಿದರು.